# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ 07 ಬ್ಯಾಟರಾಯನಪುರ ವಾರ್ಡ್ ಸಮಿತಿ ಸಭೆಯ ನಡವಳಿ.

ದಿನಾಂಕ 19.04.2021 ರಂದು ವಾರ್ಡ್ ಕಛೇರಿಯಲ್ಲಿ ಬೆಳ್ಳಿಗೆ 10.30 ಕ್ಕೆ ನೋಡಲ್ ಅಧಿಕಾರಿಗಳ ಸಮಕ್ಷಮದಲ್ಲಿ ಸಭೆಯನ್ನು ಹಮ್ಮಿಕೊಳ್ಳಲಾಯಿತು. ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ ನಂ.07, ಬ್ಯಾಟರಾಯನಪುರ ವಾರ್ಡ್‌ಗೆ ಮಾನ್ಯ ಆಯುಕ್ತರ ಆದೇಶದಂತೆ ನೋಡಲ್ ಅಧಿಕಾರಿಯಾಗಿ ನಿಯೋಜಿಸಲಾಗಿರುವ ಶ್ರೀ.ಪ್ರಕಾಶ್.ಜಿ ರವರು ಸಭೆಯಲ್ಲಿ ಹಾಜರಿದ್ದು, ಈ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಗಮನ ಹರಿಸಿ, ಕೈಗೊಂಡ ಕ್ರಮದ ಬಗ್ಗೆ ಚರ್ಚಿಸಲಾಯಿತು.

**1. ಘನತ್ಯಾಜ್ಯ ನಿರ್ವಹಣೆ:**

1. ಘಣತ್ಯಾಜ್ಯಾ ನಿರ್ವಹಣೆಗೆ ಸಂಬಂದಿಸಿದಂತೆ, ಹೊಸ ಗುತ್ತಿಗೆದಾರರು, ಹಿಂದಿನ ಮಾಸಿಕೆ ಸಭೆಯಲ್ಲಿ ತಿಳಿಸಿರುವ ನ್ಯೂನತೆಗಳನ್ನು ಸರಿಪಡಿಸಿಕೊಂಡು, ಕೆಲಸ ನಿರ್ವಹಿಸುತ್ತಿರುವುದಾಗಿ ಸಭೆಯಲ್ಲಿ ಹಾಜರಿದ್ದ, ಕಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಸಮಿತಿಯ ಸದಸ್ಯರು ತಿಳಿಸಿರುತ್ತಾರೆ. ಸಾರ್ವಜನಿಕರಿಗೆ ಸೇವೆ ಸಲ್ಲಿಸುವಲ್ಲಿ ಇನ್ನೂ ಉತ್ತಮ ರೀತಿಯಲ್ಲಿ ಕೆಲಸ ನಿರ್ವಹಿಸಬೇಕೆಂದು ತಿಳಿಸಲಾಯಿತು.
2. ವಾರ್ಡ್ ವ್ಯಾಪ್ತಿಯಲ್ಲಿ ಮನೆ ಮನೆಯಿಂದ ವಿಂಗಡಣೆ ಮಾಡಿ ಕಸವನ್ನು ನೀಡುವ ಬಗ್ಗೆ ಕ್ರಮವಹಿಸಲು ಸೂಚಿಸುತ್ತಾ, ಘಣತ್ಯಾಜ್ಯಾ ಶೇಕಾಡಾವಾರು ಅನ್ನು ಹೆಚ್ಚಿಸಬೇಕೆಂದು ಕ್ರಮ ವಹಿಸಬೇಕಂದು ತಿಳಿಸಿದರು.

**2. ಆರೋಗ್ಯ ಇಲಾಖೆ:**

1. ಕೋವಿಡ್ ನಿಂಯತ್ರಣದ ಬಗ್ಗೆ ಕ್ರಮವಹಿಸಬೇಕಾಗಿದ್ದು, ಕೋವಿಡ್ ಸೋಂಕಿತರ ಪ್ರಥಮ/ದ್ವತೀಯ ಸಂಪರ್ಕದವರ ಮಾಹಿತಿಯನ್ನು ಕಳೆ ಆಕುವುದು ಮುಖ್ಯವಾದ ಕೆಲಸವಾಗಿರುತ್ತದೆ ಎಂದು ತಿಳಿಸಿದರು.
2. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಸೋಂಕಿತರ ಸಂಪರ್ಕದಲ್ಲಿದ್ದ, 10 ಜನ ಪ್ರಥಮ ಸಂಪರ್ಕಿತರು ಮತ್ತು 10 ದ್ವಿತೀಯ ಸಂಪರ್ಕಿತರ ಬಗ್ಗೆ ಮಾಹಿತಿ ಹಾಗೂ Home isolation.Quarentine ಬಗ್ಗೆ ಮಾಹಿತಿಯನ್ನು ಕಂದಾಯ ಇಲಾಖೆಯವರು, ಸಾರ್ವಜನಿಕ ಸ್ಥಳಗಾಳದ ಮಾಲ್ ಮತ್ತಿತರ ಸ್ಥಳಗಳಲ್ಲಿ ಹಿರಿಯ ಪರಿವೀಕ್ಷಕರು ಮತ್ತು ವಸತಿ ಸಮುಚ್ಚಾಯಗಳಲ್ಲಿ ಇಂಜಿನಿಯರಿಂಗ್ ಇಲಾಖೆಯಿಂದ ನಿರ್ವಹಿಸಬೇಕೆಂದು ಮಾನ್ಯ ಅಪರ ಆಯುಕ್ತರು, ಯಲಹಂಕ ವಲಯ ರವರು ಸೂಚಿಸಿರುತ್ತಾರೆ. ಅದರಂತೆ ಸಭೆಯಲ್ಲಿ ಹಾಜರಿದ್ದ, ಕೋವಿಡ್-19 ಟೆಸ್ಟಿಂಗ್ ಮತ್ತು ವಾಕ್ಸಿನೇನ್ ಬಗ್ಗೆ ದಿನನಿತ್ಯ ಕ್ರಮ ವಹಿಸಬೇಕಂದು ಮನವಿ ಮಾಡಲಾಯಿತು.

3. ಕಾಮಗಾರಿ ವಿಭಾಗ:

1. ಸಭೆಯಲ್ಲಿ ಹಾಜರಿದ್ದವರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲೇ ರಸ್ತೆ ಗುಂಡಿಗಳು ಕಂಡುಬಂದ್ದಲ್ಲಿ ಕೂಡಲೇ ವಾರ್ಡ್ ಕಛೇರಿಗೆ ಅಥವಾ ವಾರ್ಡ್ ಅಭಿಯಂತರರಿಗೆ ತಿಳಿಸಲು ಮನವಿ ಮಾಡಲಾಯಿತು.
2. ಸಹಕಾರನಗರ ಬಡಾವಣೆಯಲ್ಲಿ, ಮೋಬೈಲ್/ ಚಿನ್ನದ ಸರ ಕಳ್ಳತನದ ಪ್ರಕರಣಗಳು ಹೆಚ್ಚಾಗಿದ್ದು, ಈ ಪ್ರದೇಶಗಳಲ್ಲಿ, ಹೊಯ್ಸಳ ವಾಹನದ ಗಸ್ತನ್ನು ಹೆಚ್ಚಿಸಲು ಶಿಫಾರಸ್ಸು ಮಾಡಲು ಮನವಿ ಮಾಡಿರುತ್ತಾರೆ.

4. <u>ವಿದ್ಯುತ್ (ಬೀದಿ ದೀಪಗಳ ನಿರ್ವಹಣೆ) ವಿಭಾಗ:</u>

1. ಬೀದಿ ದೀಪಗಳ ನಿರ್ವಹಣೆ ಅತ್ಯಂತ ಪ್ರಮುಖವಾದ ಕೆಲಸವಾಗಿದ್ದು, ಬೀದಿ ದೀಪಗಳನ್ನು ಅದಷ್ಟು ಸುಸ್ಥಿತಿಯಲ್ಲಿಡುವುದು.
2. ವಾರ್ಡ್ ವ್ಯಾಪ್ತಿಯಲ್ಲಿ ಅಳವಡಿಸಲಾಗಿರುವ ಎಲ್.ಇ.ಡಿ ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವುದರ ಬಗ್ಗೆ ಕ್ರಮವಹಿಸುವುದು.

5. <u>ಕಂದಾಯ ವಿಭಾಗ:</u>

1. ವಾರ್ಡ್ ವ್ಯಾಪ್ತಿಯಲ್ಲಿನ ಕಂದಾಯ ಪಾವತಿಯನ್ನು ಬಾಕಿ ಉಳಿಸಿಕೊಂಡಿರುವ ಪ್ರಮುಖ ಸಂಸ್ಥೆಗಳನ್ನು ಗುರುತಿಸಿ ಇವುರುಗಳಿಂದ ಕಂದಾಯವನ್ನು ವಸೂಲಿ ಮಾಡಲು ಸೂಕ್ತ ಕ್ರಮಕೈಗೊಳ್ಳಲುವುದು.
2. ಮುಂದಿನ ಸಭೆಗೆ, ವಾರ್ಡ್ ವ್ಯಾಪ್ತಿಯಲ್ಲಿ, DWCC AND Bio methanisationplant ಘಟಕವನ್ನು ನಿರ್ಮಿಸಲು, ವಾರ್ಡ್‌ನಲ್ಲಿ ಲಭ್ಯವಿರುವ ಸರ್ಕಾರಿ ಜಾಗವನ್ನು ಗುರುತಿಸಕೊಡಬೇಕೆಂದು ಸಭೆಯಲ್ಲಿ ಹಾಜರಿದ್ದ, ಕಂದಾಯ ಇಳಾಖೆಯ ಅಧಿಕಾರಿಗಳಿಗೆ ನೋಡೆಲ್ ಅಧಿಕಾರಿಯವರು ಸೂಚಿಸಿದರು.

6. <u>ಜಲಮಂಡಳಿ ವಿಭಾಗ:</u>

1. ರಸ್ತೆ ಡಾಂಬರೀಕರಣ ಮುಗಿದ ನಂತರ ಸ್ಯಾನಿಟರಿ ಚೇಂಬರ್‌ಗಳ ಮಟ್ಟವನ್ನು ರಸ್ತೆ ಮಟ್ಟಕ್ಕೆ ಸರಿಪಡಿಸುವುದು.
2. ಮರಿಯಣ್ಣಪಾಳ್ಯದ ಹೀರಾ ಕೆಟರ್ಸ್ ರಸ್ತೆಯಲ್ಲಿ ನಿರ್ವಹಿಸಿರುವ ಒಳಚರಂಡಿ ಕಾಮಗಾರಿಯ ಇಳಿಜಾರು ಸರಿಯಿಲ್ಲದೆ ಇದ್ದು, ಇದನ್ನು ಕೂಡಲೇ ಪರಿಶಿಲಿಸಿ, ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿರುತ್ತಾರೆ.
3. ತಮ್ಮ ಇಲಾಖೆ ವತಿಯಿಂದ ರಸ್ತೆ ಅಗೆದರೆ ಅದನ್ನು ನಿಯಾಮಾನುಸಾರ ಸರಿಪಡಿಸುವುದು.

7. <u>ತೋಟಗಾರಿಕೆ:</u>

1. ಉದ್ಯಾನವನ ಗಳ ನಿರ್ವಹಣೆಯ ಗುತ್ತಿಗೆದಾರರಿಗೆ ನಿರ್ವಹಣಾ ಬಿಲ್ ನ್ನು ಸುಮಾರು 2 ವರ್ಷಗಳಿಂದ ಪಾವತಿ ಹಾಗದೆ ಇದ್ದು, ಇದರಿಂದ ಉದ್ಯಾನವನಗಳ ನಿರ್ವಹಣೆ ಕಷ್ಟವಾಗುತ್ತಿರವುದರ ಬಗ್ಗೆ ತೋಟಗಾರಿಕೆ ಅಧೀಕ್ಷಕರು ತಿಳಿಸಿದರು.

2. ಉದ್ಯಾನವನಗಳಲ್ಲಿ ಈಗಾಗಲೇ ನಿರ್ಮಿಸಿರುವ ಸಾರ್ವಜನಿಕರ ಶೌಚಾಲಯಗಳ ನಿರ್ವಹಣೆ ಕೆಲಸದಲ್ಲಿ ಯಾರಾದರೂ ಆಸಕ್ತಿವುಳ್ಳವರು ವಾರ್ಡ್ ಕಛೇರಿಗೆ ಅರ್ಜಿ ನೀಡಬೇಕೆಂದು ಸಭೆಯಲ್ಲಿ ಹಾಜರಿದ್ದವರಿಗೆ ಮನವಿ ಮಾಡಲಾಯಿತು.
3. 1.ಗುಂಡಾಜಿನೇಯಾ ದೇವಸ್ಥಾನ,2.ಸಹಕಾರನಗರ ಎ ಬ್ಲಾಕ್,3.ಜಿಕೆವಿಕೆ ಬಡಾವಣೆ,4.ಕಾಫಿ ಬೋರ್ಡ್ ಬಡಾವಣೆಯ ಉದ್ಯಾನವನಗಳಲ್ಲಿ ನಿರ್ಮಿಸಲಾಗಿರುವ ಎಲೆ ತ್ಯಾಜ್ಯಾ ಸಂಸ್ಕರಣಾ ಘಟಕವನ್ನು ಕಾರ್ಯ ರೂಪಕ್ಕೆ ತರಲಾಗುವುದು ಎಂದು ತಿಳಿಸಲಾಗಿರುತ್ತದೆ. ಸದರಿ ವಿಷಯದ ಬಗ್ಗೆ ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ ರವರಿಂದ ಕಡತವನ್ನು ತೋಟಗಾರಿಕೆ ಇಲಾಖೆಗೆ ಕಳುಹಿಸಲಾಗಿರುತ್ತದೆ.

8. ಅರಣ್ಯ ಇಲಾಖೆ:-

1. ಅರಣ್ಯ ವಿಭಾಗದವರು ವಾರ್ಡ್ ಸಮಿತಿ ಸಭೆಗೆ ಹನುಮಂತಪ್ಪ ಪಾಟೀಲ್ ರವರು ಹಾಜರಿದ್ದು, ಪಂಪಾ ಬಡಾವಣೆ ಮತ್ತು ಅಮೃತನಗರ ಮಾರುತಿ ಪಾರ್ಮ್ ಹತ್ತಿರ ಪೂರ್ಣವಾಗಿ ಒಣಗಿಹೋಗಿರುವ ಮರಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತೆರವುಮಾಡಬೇಕೆಂದು ಸೂಚಿಸಲಾಗಿರುತ್ತದೆ. ಸದರಿ ವಿಷಯ ಬಗ್ಗೆ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಸೂಚಿಸಲಾಗಿದೆ.

N.D.
ಕಾರ್ಯದರ್ಶಿ 19/4/2021
ವಾರ್ಡ್ 07